ವಿಜಯವಾಣಿ
VIJAYAVANI » MANGALURU
ಗುರುವಾರ 8 ಜೂನ್ 2023
8 JUNE 2023

ಕೆಎಂಸಿಯಲ್ಲಿ ಭ್ರೂಣಶಾಸ್ತ್ರ ಮತ್ತು ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರ ಉದ್ಘಾಟಿಸಿ ಆಕಿಮ್ ಬುರ್ಕಾರ್ಟ್ ಹೇಳಿಕೆ

# ಕರೊನಾ ಬಳಿಕ ಆರೋಗ್ಯ ಕ್ಷೇತ್ರದಲ್ಲಿ ಬದಲಾವಣೆ

■ ವಿಜಯವಾಣಿ ಸುದ್ದಿಜಾಲ ಉಡುಪಿ

ಕರೊನೋತ್ತರ ಜಗತ್ತಿನಲ್ಲಿ ಆರೋಗ್ಯ ಕ್ಷೇತ್ರದಲ್ಲಿ ವ್ಯಾಪಕ ಬದಲಾವಣೆಗಳಾಗುತ್ತಿದ್ದು, ಭಾರತದ ವೈದ್ಯರು, ದಾದಿಯರಿಗೆ ಜರ್ಮನಿಯಲ್ಲಿ ಹೆಚ್ಚಿನ ಬೇಡಿಕೆ ಇದೆ. ಕುಟುಂಬ ಸಮೇತರಾಗಿ ವಾಸಿಸುವುದಕ್ಕೂ ಅವಕಾಶಗಳನ್ನು ನೀಡಲಾಗುತ್ತಿದೆ ಎಂದು ಬೆಂಗಳೂರಿನ ಜರ್ಮನಿ ರಾಯಭಾರಿ ಕಚೇರಿಯ ಕಾನ್ಸುಲ್ ಜನರಲ್ ಆಕಿಮ್ ಬುರ್ಕಾರ್ಟ್ ಹೇಳಿದರು.

ಬುಧವಾರ ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಭ್ರೂಣಶಾಸ್ತ್ರ ಮತ್ತು ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರ ಉದ್ಘಾಟಿಸಿ ಮಾತನಾಡಿದರು.

ಮಣಿಪಾಲ ಶಿಕ್ಷಣ, ಆರೋಗ್ಯ ಸೇವೆಯ ಶ್ರೇಷ್ಠತೆ ಮತ್ತು ಹೊಸ ಆವಿಷ್ಕಾರಗಳ ಕೇಂದ್ರವಾಗಿದೆ. ವೈದ್ಯಕೀಯ ಜ್ಞಾನವನ್ನು ಹೆಚ್ಚಿಸುವ ಬದ್ಧತೆಯೊಂದಿಗೆ, ರೋಗಿಗಳಿಗೆ ಉತ್ತಮ ಗುಣಮಟ್ಟದ ಆರೈಕೆ ಮತ್ತು ಚಿಕಿತ್ಸೆ ನೀಡುತ್ತಿದೆ. ಈ ಕೇಂದ್ರದ ಉದ್ಘಾಟನೆ ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜಿನಲ್ಲಿ ಸಂತಾನೋತ್ಪತ್ತಿ ಸಮಸ್ಯೆಗಳಲ್ಲಿ ಆರೋಗ್ಯವನ್ನು ಸುಧಾರಿಸುವ ನಿಟ್ಟಿನಲ್ಲಿ ಪ್ರಗತಿಯನ್ನು ಸಾಧಿಸಲಿದೆ ಎಂದರು.




ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಮಹಾ ವಿದ್ಯಾಲಯದಲ್ಲಿ ಭ್ರೂಣಶಾಸ್ತ್ರ ಮತ್ತು ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರವನ್ನು ಬೆಂಗಳೂರಿನ ಜರ್ಮನಿ ರಾಯಭಾರಿ ಕಚೇರಿಯ ಕಾನ್ಸುಲ್ ಜನರಲ್ ಆಕಿಮ್ ಬುರ್ಕಾರ್ಟ್ ಉದ್ಘಾಟಿಸಿದರು. ಮಾಹೆ ಮಣಿಪಾಲದ ಸಹ ಕುಲಪತಿ ಡಾ.ಶರತ್ ಕುಮಾರ್ ರಾವ್, ಮಾಹೆ ಮಣಿಪಾಲದ ಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ.) ಎಂ.ಡಿ.ವೆಂಕಟೇಶ್, ಪ್ರೊ.ಡಾ.ಸತೀಶ್ ಅಡಿಗ ಮೊದಲಾದವರು ಉಪಸ್ಥಿತರಿದ್ದರು.

ಜರ್ಮನಿ ಮತ್ತು ಭಾರತ ಕಳೆದ ಏಳು ದಶಕಗಳಲ್ಲಿ ನಿರಂತರವಾಗಿ ಸಂಬಂಧಗಳನ್ನು ಬಲಪಡಿಸಿದೆ. ವಿಶೇಷವಾಗಿ ಆರೋಗ್ಯ ಕ್ಷೇತ್ರದಲ್ಲಿ ಅಂತಾರಾಷ್ಟ್ರೀಯ ಸಂಶೋಧನಾ ಸಹಕಾರವನ್ನು ಉತ್ತೇಜಿಸಲು ಎರಡೂ ದೇಶಗಳು ಈಗ ಒತ್ತು ನೀಡುತ್ತಿವೆ. ಜರ್ಮನ್ ಕಂಪನಿಗಳು ಸಂಶೋಧನೆ ಮತ್ತು ಅಭಿವೃದ್ಧಿ ಚಟುವಟಿಕೆಗಳಿಗಾಗಿ ವಿಶ್ವ ವಿದ್ಯಾಲಯಗಳೊಂದಿಗೆ ತೊಡಗಿಸಿಕೊಂಡಿವೆ. ಬೆಂಗಳೂರಿನಲ್ಲಿ ವಿಶ್ವದಾದ್ಯಂತ ಅತಿದೊಡ್ಡ ಸಂಶೋಧನಾ ಅಭಿವೃದ್ಧಿ ಸೌಲಭ್ಯವನ್ನು ಸ್ಥಾಪಿಸುವ ನಿಟ್ಟಿನಲ್ಲಿ 135 ಬಿಲಿಯನ್ ಯುರೋ ಮೊತ್ತದ ಹೂಡಿಕೆ ಪ್ರಕ್ರಿಯೆ ಚಾಲನೆಯಲ್ಲಿದೆ ಎಂದು ಅವರು ಹೇಳಿದರು. ಮಾಹೆ ಮಣಿಪಾಲದ ಸಹ ಕುಲಪತಿ ಡಾ.ಶರತ್ ಕುಮಾರ್ ರಾವ್ ಮಾತನಾಡಿ, ಬಂಜೆತನಕ್ಕೆ ಚಿಕಿತ್ಸೆ ಮತ್ತು ಬಂಜೆತನ ನಿರ್ಮೂಲನೆ ಕ್ಷೇತ್ರವನ್ನು ಮುನ್ನಡೆಸುವಲ್ಲಿ ಸಂಶೋಧನೆ ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ. ಹೊಸ ಚಿಕಿತ್ಸಾ ವಿಧಾನಗಳನ್ನು ಅನ್ವೇಷಿಸಲು ಮತ್ತು ಅಸ್ತಿತ್ವದಲ್ಲಿರುವ ಉಪಕ್ರಮಗಳನ್ನು ಹೆಚ್ಚಿಸಲು ವೇದಿಕೆ ಒದಗಿಸುತ್ತದೆ ಎಂದರು.

ಮಾಹೆ ಮಣಿಪಾಲದ ಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ.) ಎಂ.ಡಿ.ವೆಂಕಟೇಶ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕ್ಲಿನಿಕಲ್ ಭ್ರೂಣಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ.ಡಾ.ಸತೀಶ್ ಅಡಿಗ ಪ್ರಸ್ತಾವಿಕವಾಗಿ ಮಾತನಾಡಿದರು. ಕೆಎಂಸಿ ಡೀನ್ ಡಾ.ಪದ್ಮರಾಜ್ ಹೆಗ್ಡೆ ಸ್ವಾಗತಿಸಿ, ಪ್ರಜನನ ವಿಜ್ಞಾನ ವಿಭಾಗದ ಮುಖ್ಯಸ್ಥ ಪ್ರಾಧ್ಯಾಪಕ ಡಾ.ಗುರುಪ್ರಸಾದ್ ಕಲ್ಲೂರು ವಂದಿಸಿದರು. ರಿಕಿ ಜೋಶಿ ಕಾರ್ಯಕ್ರಮ ನಿರೂಪಿಸಿದರು.

ಪ್ರಜಾವಾಣಿ
ಗುರುವಾರ • ಜೂನ್ 8, 2023

ಮಣಿಪಾಲದ ಕೆಎಂಸಿಯಲ್ಲಿ ಭ್ರೂಣಶಾಸ್ತ್ರ ಮತ್ತು ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರ ಉದ್ಘಾಟನೆ

# ಇಂಡೋ-ಜರ್ಮನ್ ಪಾಲುದಾರಿಕೆ: ಆರೋಗ್ಯಕ್ಷೇತ್ರದ ಪ್ರಗತಿ

ಪ್ರಜಾವಾಣಿ ವಾರ್ತೆ

ಉಡುಪಿ: ಮಣಿಪಾಲದ ಕಸ್ತೂರಬಾ ವೈದ್ಯಕೀಯ ಮಹಾ ವಿದ್ಯಾಲಯದಲ್ಲಿ ಬುಧವಾರ ಮಣಿಪಾಲದ ಭ್ರೂಣಶಾಸ್ತ್ರ ಮತ್ತು ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರವನ್ನು ಫೆಡರಲ್ ರಿಪಬ್ಲಿಕ್ ಆಫ್ ಜರ್ಮನಿಯ ಕಾನ್ಸುಲ್ ಜನರಲ್ ಆಕಿಮ್ ಬುರ್ಕಾರ್ಟ್ ಉದ್ಘಾಟಿಸಿದರು.

ಬಳಿಕ ಮಾತನಾಡಿ, ಮಾಹೆ ಸಂಸ್ಥೆಯು ಶಿಕ್ಷಣ, ಆರೋಗ್ಯ ಸೇವೆಯ ಶ್ರೇಷ್ಠತೆ ಹಾಗೂ ಹೊಸ ಆವಿಷ್ಕಾರಗಳ ಕೇಂದ್ರವಾಗಿದ್ದು ವೈದ್ಯಕೀಯ ಜ್ಞಾನ ಹೆಚ್ಚಿಸುವ ಬದ್ಧತೆಯೊಂದಿಗೆ ರೋಗಿಗಳಿಗೆ ಗುಣಮಟ್ಟದ ಆರೈಕೆ ಮತ್ತು ಚಿಕಿತ್ಸೆ ನೀಡುತ್ತಿದೆ ಎಂದರು.

ಕಸ್ತೂರ್ಬಾ ವೈದ್ಯಕೀಯ ಕಾಲೇಜಿನಲ್ಲಿ ಫಲವತ್ತತೆ, ಸಂತಾನೋತ್ಪತ್ತಿ ಸಮಸ್ಯೆಗಳಿಗೆ ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ಸಿಗಲಿದೆ. ಜರ್ಮನಿ ಮತ್ತು ಭಾರತ ಏಳು ದಶಕಗಳ ಅವಧಿಯಲ್ಲಿ ನಿರಂತರವಾಗಿ ಸಂಬಂಧ ಬಲಪಡಿಸಿಕೊಂಡಿವೆ. ವೈಜ್ಞಾನಿಕ ಸಹಕಾರ ಹಾಗೂ ಆರೋಗ್ಯ ಕ್ಷೇತ್ರಕ್ಕೆ ಅನುಕೂಲವಾಗುವಂತೆ ಅಂತರರಾಷ್ಟ್ರೀಯ ಸಂಶೋಧನಾ ನೆರವು ಉತ್ತೇಜಿಸಲು ಎರಡೂ ದೇಶಗಳು ಒತ್ತು ನೀಡುತ್ತಿವೆ' ಎಂದರು.



ಮಣಿಪಾಲದ ಭ್ರೂಣಶಾಸ್ತ್ರ ಮತ್ತು ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರವನ್ನು ಜರ್ಮನಿಯ ಕಾನ್ಸುಲ್ ಜನರಲ್ ಆಕಿಮ್ ಬುರ್ಕಾರ್ಟ್ ಉದ್ಘಾಟಿಸಿದರು

ಬೆಂಗಳೂರಿನಲ್ಲಿ 135 ಬಿಲಿಯನ್ ಯುರೋ ಹೂಡಿಕೆ ಮಾಡುವ ಮೂಲಕ ವಿಶ್ವದಾದ್ಯಂತ ಅತಿದೊಡ್ಡ ಸಂಶೋಧನಾ ಅಭಿವೃದ್ಧಿ ಸೌಲಭ್ಯವನ್ನು ಸ್ಥಾಪಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಆಕಿಮ್ ಬುರ್ಕಾರ್ಟ್ ಹೇಳಿದರು.

ಮಾಹೆ ಮಣಿಪಾಲದ ಸಹ ಕುಲಪತಿ ಡಾ.ಶರತ್ ಕುಮಾರ್ ರಾವ್ ಮಾತನಾಡಿ, 'ಬಂಜೆತನಕ್ಕೆ ಚಿಕಿತ್ಸೆ ನೀಡುವ ಹಾಗೂ ಬಂಜೆತನ ನಿರ್ಮೂಲನೆ ಮಾಡುವಲ್ಲಿ ಸಂಶೋಧನೆ ನಿರ್ಣಾಯಕ ಪಾತ್ರ ವಹಿಸುತ್ತದೆ' ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಮಾಹೆ ಮಣಿಪಾಲದ ಕುಲಪತಿ ಲೆಫ್ಟಿನೆಂಟ್ ಜನರಲ್ ಡಾ.ಎಂ.ಡಿ.ವೆಂಕಟೇಶ್ ಮಾತನಾಡಿ, 'ಜರ್ಮನ್ ಸಂಸ್ಥೆಗಳೊಂದಿಗಿನ ಸಹಭಾಗಿತ್ವವು ಆಫ್ರಿಕನ್ ದೇಶಗಳಲ್ಲಿರುವ ಐವಿಎಫ್ ಕೇಂದ್ರಗಳಲ್ಲಿ ಕೆಲಸ ಮಾಡಲು ಸಮರ್ಥ ಮಾನವ ಸಂಪನ್ಮೂಲಗಳನ್ನು ಉತ್ಪಾದಿಸಲು, ಅತ್ಯುತ್ತಮ ಆರೋಗ್ಯ ಸೇವೆ ನೀಡಲು ನೆರವಾಗಲಿದೆ. ವಿಜ್ಞಾನ ಕೇಂದ್ರ ಆವಿಷ್ಕಾರಗಳಿಗೆ ದಾರಿ ಮಾಡಿಕೊಡಲಿದ್ದು ಆರೋಗ್ಯ ವೃತ್ತಿಪರರನ್ನು ಸಬಲೀಕರಣಗೊಳಿಸಲಿದೆ' ಎಂದರು.

**ಮುಖ್ಯಾಂಶಗಳು**

- ಫಲವತ್ತತೆ, ಸಂತಾನೋತ್ಪತ್ತಿ ಸಮಸ್ಯೆಗಳಿಗೆ ಗುಣಮಟ್ಟದ ಚಿಕಿತ್ಸೆ
- ಮಣಿಪಾಲ: ಲಿಂಗ ಸಮಾನತೆಯಲ್ಲಿ ವಿಶ್ವದಲ್ಲಿ 4ನೇ ಸ್ಥಾನ
- ಆವಿಷ್ಕಾರಗಳಿಗೆ ದಾರಿ ಮಾಡಿ, ಆರೋಗ್ಯ ವೃತ್ತಿಪರರ ಸಬಲೀಕರಣ

'ಈಚೆಗೆ ಪ್ರಕಟವಾದ ಟೈಮ್ಸ್ ಇಂಪ್ಯಾಕ್ಟ್ ರಾಂಕಿಂಗ್‌ನಲ್ಲಿ ಮಾಹೆ ಮಣಿಪಾಲವು ಲಿಂಗ ಸಮಾನತೆಯಲ್ಲಿ ವಿಶ್ವದಲ್ಲಿ 4ನೇ ಸ್ಥಾನ ಮತ್ತು ಗುಣಮಟ್ಟದ ಶಿಕ್ಷಣದಲ್ಲಿ 25ನೇ ಸ್ಥಾನ ಪಡೆದುಕೊಂಡಿದೆ. ಎನ್‌ಐಆರ್‌ಎಫ್ ರ್‍ಯಾಂಕಿಂಗ್‌ನಲ್ಲಿ ವಿಶ್ವವಿದ್ಯಾಲಯ ವರ್ಗದಲ್ಲಿ 6ನೇ ಸ್ಥಾನ ಪಡೆದುಕೊಂಡಿದೆ' ಎಂದರು.

ಕ್ಲಿನಿಕಲ್ ಭ್ರೂಣಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಸತೀಶ್ ಅಡಿಗ ಮಣಿಪಾಲ್ ಸೆಂಟರ್ ಫಾರ್ ಎಂಬ್ರಿಯಾಲಜಿ ಮತ್ತು ರಿಪ್ರೊಡಕ್ಟಿವ್ ಸೈನ್ಸ್ ಕುರಿತು ಅವಲೋಕನ ನೀಡಿದರು.

2005ರಲ್ಲಿ ಮಣಿಪಾಲದ ಕಸ್ತೂರಬಾ ಮೆಡಿಕಲ್ ಕಾಲೇಜು ಕ್ಲಿನಿಕಲ್ ಎಂಬ್ರಿಯಾಲಜಿ ಉಪವಿಭಾಗ ಆರಂಭಿಸಲಾಗಿದ್ದು ಏಷ್ಯಾದಲ್ಲಿಯೇ ಪ್ರಥಮವಾಗಿದೆ. ಕೇಂದ್ರವು ಏಷ್ಯಾದ ಉನ್ನತ ಕೇಂದ್ರಗಳಲ್ಲಿ ಒಂದಾಗಿದೆ ಎಂದು ಕೆಎಂಸಿ ಡೀನ್ ಡಾ.ಪದ್ಮರಾಜ ಹೆಗ್ಡೆ ಹೇಳಿದರು.

ಕೆಎಂಸಿ ಮಣಿಪಾಲದ ಡೀನ್ ಡಾ. ಪದ್ಮರಾಜ್ ಹೆಗ್ಡೆ ಸ್ವಾಗತಿಸಿದರು. ಪ್ರಜನನ ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ. ಗುರುಪ್ರಸಾದ್ ಕಲ್ಲೂರು ವಂದಿಸಿದರು. ಮಿಸ್ ರಿಕಿ ಜೋಶಿ ನಿರೂಪಿಸಿದರು.

ವಿಜಯ ಕರ್ನಾಟಕ

ಗುರುವಾರ,8 ಜೂನ್ 2023, ಮಂಗಳೂರು

# ಭ್ರೂಣಶಾಸ್ತ್ರ, ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರ ಉದ್ಘಾಟನೆ

■ **ವಿಕ ಸುದ್ದಿಲೋಕ** ಉಡುಪಿ




ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಮಹಾ ವಿದ್ಯಾಲಯದಲ್ಲಿ ಮಣಿಪಾಲ ಭ್ರೂಣಶಾಸ್ತ್ರ ಮತ್ತು ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರ(ಮಣಿಪಾಲ್ ಸೆಂಟರ್ ಫಾರ್ ಎಂಬ್ರಿಯಾಲಜಿ ಆ್ಯಂಡ್ ರಿಪ್ರೊಡಕ್ಟಿವ್ ಸೈನ್ಸ್) ಬುಧವಾರ ಉದ್ಘಾಟನೆಗೊಂಡಿತು.

ಬೆಂಗಳೂರು ಫೆಡರಲ್ ರಿಪಬ್ಲಿಕ್ ಆಫ್ ಜರ್ಮನಿಯ ಕಾನ್ಸುಲ್ ಜನರಲ್ ಆಕಿಮ್ ಬುರ್ಕಾರ್ಟ್ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿ, ಈ ಕೇಂದ್ರದ ಉದ್ಘಾಟನೆ ಮಣಿಪಾಲ ಕಸ್ತೂರ್ಬಾ ವೈದ್ಯಕೀಯ ಕಾಲೇಜಿನಲ್ಲಿ ಫಲವತ್ತತೆ ಇತರ ಸಂತಾನೋತ್ಪತ್ತಿ ಸಮಸ್ಯೆಗಳಲ್ಲಿ ಆರೋಗ್ಯ ಸುಧಾರಿಸುವ ಉದ್ದೇಶವನ್ನು ಪೂರೈಸುವಲ್ಲಿ ಮತ್ತೊಂದು ಪ್ರಗತಿ ಸಾಧಿಸಲಿದೆ ಎಂದರು.

ಮಣಿಪಾಲ ಮಾಹೆ ಸಹ ಕುಲಪತಿ ಡಾ. ಶರತ್ ಕುಮಾರ್ ರಾವ್ ಮಾತನಾಡಿ, ಇದು ಹೊಸ ಚಿಕಿತ್ಸಾ ವಿಧಾನಗಳನ್ನು ಅನ್ವೇಷಿಸಲು ಮತ್ತು ಅಸ್ತಿತ್ವದಲ್ಲಿರುವ ತಂತ್ರಗಳನ್ನು ಹೆಚ್ಚಿಸಲು ವೇದಿಕೆಯನ್ನು ಒದಗಿಸುತ್ತದೆ. ಬಂಜೆತನದ ಮೂಲ ಕಾರಣಗಳನ್ನು ಪತ್ತೆ ಹಚ್ಚಲು ಸಹಕಾರಿ ಎಂದರು.

ಅಧ್ಯಕ್ಷತೆ ವಹಿಸಿದ್ದ ಮಾಹೆ ಮಣಿಪಾಲದ ಕುಲಪತಿ ಲೆಫ್ಟಿನೆಂಟ್ ಜನರಲ್ ಡಾ.ಎಂ.ಡಿ. ವೆಂಕಟೇಶ್ ಮಾತನಾಡಿದರು. ಕ್ಲಿನಿಕಲ್ ಭ್ರೂಣಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ. ಸತೀಶ್ ಅಡಿಗ ಉಪಸ್ಥಿತರಿದ್ದರು. ಮಣಿಪಾಲ ಕೆಎಂಸಿ ಡೀನ್ ಡಾ. ಪದ್ಮರಾಜ್ ಹೆಗ್ಡೆ ಸ್ವಾಗತಿಸಿ, ಪ್ರಜನನ ವಿಜ್ಞಾನ ವಿಭಾಗದ ಮುಖ್ಯಸ್ಥ ಪ್ರಾಧ್ಯಾಪಕ ಡಾ. ಗುರುಪ್ರಸಾದ್ ಕಳ್ತೂರು ವಂದಿಸಿದರು.

2005ರಲ್ಲಿ ಮಣಿಪಾಲದ ಕಸ್ತೂರ್ಬಾ ಮೆಡಿಕಲ್ ಕಾಲೇಜು ಕ್ಲಿನಿಕಲ್ ಎಂಬ್ರಿಯಾಲಜಿ ಉಪವಿಭಾಗವನ್ನು ಆರಂಭಿಸಿದ್ದು, ಇದು ವಿಶ್ವಾದಲ್ಲಿಯೇ ಮೊದಲನೆಯದು. ಸಂಪೂರ್ಣ ಶೈಕ್ಷಣಿಕ ತರಬೇತಿ, ಸಂಶೋಧನಾ ಅನುಭವ, ನೈತಿಕತೆ ಮತ್ತು ಬಂಜೆತನಕ್ಕೆ ಸಂಬಂಧಿಸಿದ ಕೌಶಲ್ಯಗಳನ್ನು ಒದಗಿಸುವ ಗುರಿಯನ್ನು ಹೊಂದಿದೆ. ಬಂಜೆತನ ಮತ್ತು ಭ್ರೂಣಶಾಸ್ತ್ರ ಕ್ಷೇತ್ರದಲ್ಲಿ ಸುಧಾರಿತ ತರಬೇತಿ ಮತ್ತು ಸಂಶೋಧನೆಗಾಗಿ ಈ ಕೇಂದ್ರವು ವಿಶ್ವಾದ ಉನ್ನತ ಕೇಂದ್ರಗಳಲ್ಲಿ ಒಂದಾಗಿದೆ. ನಿಖಿ ಜೋಶಿ ಕಾರ್ಯಕ್ರಮ ನಿರೂಪಿಸಿದರು.

8-6-2023
UDAYAVANI - MANIPAL

# ಕೆಎಂಸಿ ಆಸ್ಪತ್ರೆಯಲ್ಲಿ 'ಮಣಿಪಾಲ ಭ್ರೂಣಶಾಸ್ತ್ರ ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರ' ಉದ್ಘಾಟನೆ



ಮಣಿಪಾಲ, ಜೂ. 7: ಕಸ್ತೂರ್ಬಾ ವೈದ್ಯಕೀಯ ಮಹಾವಿದ್ಯಾನಿಲಯದಲ್ಲಿ ಮಣಿಪಾಲ ಭ್ರೂಣಶಾಸ್ತ್ರ ಮತ್ತು ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರ (ಮಣಿಪಾಲ್ ಸೆಂಟರ್ ಫಾರ್ ಎಂಬ್ರಿಯಾಲಜಿ ಆ್ಯಂಡ್ ರಿಪ್ರೊಡಕ್ಟಿವ್ ಸೈನ್ಸ್) ಉದ್ಘಾಟನೆ ಬುಧವಾರ ನಡೆಯಿತು.

ಬೆಂಗಳೂರಿನ ಫೆಡರಲ್ ರಿಪಬ್ಲಿಕ್ ಆಫ್ ಜರ್ಮನಿಯ ಕಾನ್ಸುಲ್ ಜನರಲ್ ಆಕಿಮ್ ಬುರ್ಕಾರ್ಟ್ ಅವರು ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿ, ಮಾಹೆ ವಿ.ವಿ. ಶಿಕ್ಷಣ, ಆರೋಗ್ಯ ಸೇವೆಯ ಶ್ರೇಷ್ಠತೆ ಮತ್ತು ಹೊಸ ಆವಿಷ್ಕಾರಗಳ ಕೇಂದ್ರವಾಗಿದೆ. ವೈದ್ಯಕೀಯ ಜ್ಞಾನವನ್ನು ಹೆಚ್ಚಿಸುವ ಬದ್ಧತೆಯೊಂದಿಗೆ, ರೋಗಿಗಳಿಗೆ ಉತ್ತಮ ಗುಣಮಟ್ಟದ ಆರೈಕೆ ಮತ್ತು ಚಿಕಿತ್ಸೆ ಒದಗಿಸುತ್ತಿದೆ. ಈ ಕೇಂದ್ರದಿಂದ ಕಾಲೇಜಿನಲ್ಲಿ ಫಲವತ್ತತೆ ಇತರ ಸಂತಾನೋತ್ಪತ್ತಿ ಸಮಸ್ಯೆಗಳಲ್ಲಿ ಆರೋಗ್ಯವನ್ನು ಸುಧಾರಿಸುವ ಉದ್ದೇಶ ಪೂರೈಸುವಲ್ಲಿ ಮತ್ತೊಂದು ಪ್ರಗತಿಯನ್ನು ಸಾಧಿಸಲಿದೆ ಎಂದರು.

ಮಾಹೆ ವಿ.ವಿ. ಸಹಕುಲಪತಿ ಡಾ| ಶರತ್ ಕುಮಾರ್ ರಾವ್, ಬಂಜೆತನಕ್ಕೆ ಚಿಕಿತ್ಸೆ ಮತ್ತು ಬಂಜೆತನ ನಿರ್ಮೂಲನೆಯಲ್ಲಿ ಸಂಶೋಧನೆ ನಿರ್ಣಾಯಕ ಪಾತ್ರ ವಹಿಸುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಮಾಹೆ ವಿ.ವಿ. ಕುಲಪತಿ ಲೆ| ಜ| ಡಾ| ಎಂ.ಡಿ. ವೆಂಕಟೇಶ್ ಮಾತನಾಡಿ, ಜರ್ಮನ್ ಸಂಸ್ಥೆಗಳೊಂದಿಗಿನ ಸಹಭಾಗಿತ್ವವು ಆಫ್ರಿಕನ್ ದೇಶಗಳಿಗೆ ತಮ್ಮ ಐವಿಎಫ್ ಕೇಂದ್ರಗಳಲ್ಲಿ ಕೆಲಸ ಮಾಡಲು ಸಮರ್ಥ ಮಾನವ ಸಂಪನ್ಮೂಲಗಳೊಂದಿಗೆ ಈ ಕ್ಷೇತ್ರದಲ್ಲಿ ಅತ್ಯುತ್ತಮ ಆರೋಗ್ಯ ಸೇವೆ ನೀಡಲು ಸಹಾಯ ಮಾಡುತ್ತಿದೆ ಎಂದು ತಿಳಿಸಿದರು.

ಕ್ಲಿನಿಕಲ್ ಭ್ರೂಣಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ| ಡಾ| ಸತೀಶ್ ಅಡಿಗ ಪ್ರಸ್ತಾವನೆಗೈದರು. ಕೆಎಂಸಿ ಡೀನ್ ಡಾ| ಪದ್ಮರಾಜ್ ಹೆಗ್ಡೆ ಸ್ವಾಗತಿಸಿ, ಪ್ರಜನನ ವಿಜ್ಞಾನ ವಿಭಾಗದ ಮುಖ್ಯಸ್ಥ ಪ್ರಾಧ್ಯಾಪಕ ಡಾ| ಗುರುಪ್ರಸಾದ್ ಕಳ್ಳೂರು ವಂದಿಸಿದರು. ಡಾ| ರಾಹುಲ್ ದತ್ತ ಪರಿಚಯಿಸಿದರು. ·ರಿಕಿ ಜೋಷಿ ನಿರೂಪಿಸಿದರು.

THE TIMES OF INDIA, MANGALURU
THURSDAY, JUNE 8, 2023

# Centre launched at KMC, Manipal

TIMES NEWS NETWORK

**Manipal Centre for Embryology and Reproductive Science was inaugurated at Kasturba Medical College, Manipal**

**Udupi:** The Manipal Centre for Embryology and Reproductive Science was inaugurated at Kasturba Medical College, Manipal, on Wednesday.

Achim Burkart, consul general of the Federal Republic of Germany in Bengaluru, said, "With a commitment to advancing medical knowledge, delivering high-quality patient care, and fostering collaborations, the inauguration of the centre represents another stride forward in fulfilling the mission to improve healthcare in fertility and other reproductive issues at the college."

"Germany and India have continuously strengthened their ties during the last seven decades, especially in scientific cooperation aiming to serve the welfare of the people. Both countries are now emphasising to promote international research cooperation to benefit human health. MERCK and other German companies have been involved with universities for research and development activities, and are in the process of setting up the biggest research development facility worldwide, at Bengaluru," he added.

Dr Sharath Kumar Rao, pro vice-chancellor of MAHE was the guest of honour, and Lt Gen MD Venkatesh, vice-chancellor of MAHE Manipal, presided.

Professor Satish Adiga, head of the division of clinical embryology, provided an overview of the Manipal Centre for Embryology and Reproductive Science.

THE HINDU

Thursday, June 8, 2023
MANGALURU

# Manipal Centre for Embryology and Reproductive Science opened at KMC

**The Hindu Bureau**
MANGALURU

The Manipal Centre for Embryology and Reproductive Science was inaugurated at Kasturba Medical College, Manipal on Wednesday.

Achim Burkart, Consul General of the Federal Republic of Germany in Bengaluru, who inaugurated it in his address said that the centre will help to address issues relating to fertility and other reproductive issues.

"Germany and India have continuously strengthened their ties during the last seven decades, especially in scientific cooperation aiming to serve the welfare of the people. Both countries are now emphasizing to promote international research cooperation to benefit human health," a release from KMC quoted him as saying.

Addressing the gathering, M.D. Venkatesh, Vice-Chancellor of MAHE said: "Our partnership with German industries has been helping African countries by producing competent human resources to work in their IVF centers thereby trying to provide the best healthcare in this field. We are confident that the center will pave the way for groundbreaking discoveries, empower healthcare professionals, and provide renewed hope to those facing infertility challenges."



The Manipal Centre for Embryology and Reproductive Science being inaugurated by Achim Burkart, Consul General of the Federal Republic of Germany, at Kasturba Medical College on Wednesday.

Sharath Kumar Rao, Pro Vice-Chancellor, Manipal Academy of Higher Education (MAHE), said that research plays a crucial role in taking forward infertility practice as it provides a platform for discovering new treatment modalities, enhancing existing techniques, and unraveling the underlying causes of infertility. The centre is committed to spearheading the research, he said.

# ಮಾಹೆ ಮಣಿಪಾಲದ ಕೆಎಂಸಿ ನಲ್ಲಿ ಮಣಿಪಾಲ ಭ್ರೂಣಶಾಸ್ತ್ರ ಮತ್ತು ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರ ಉದ್ಘಾಟನೆ

June 7, 2023 115 No Comment



ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಮಹಾ ವಿದ್ಯಾಲಯದಲ್ಲಿ ಇಂದು "ಮಣಿಪಾಲ ಭ್ರೂಣಶಾಸ್ತ್ರ ಮತ್ತು ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರ (ಮಣಿಪಾಲ್ ಸೆಂಟರ್ ಫಾರ್ ಎಂಬ್ರಿಯಾಲಜಿ & ರಿಪ್ರೊಡಕ್ಟಿವ್ ಸೈನ್ಸ್)" ಇದರ ಉದ್ಘಾಟನೆ ನಡೆಯಿತು. ಆಕಿಮ್ ಬುರ್ಕಾರ್ಟ್, ಫೆಡರಲ್ ರಿಪಬ್ಲಿಕ್ ಆಫ್ ಜರ್ಮನಿಯ ಕಾನ್ಸುಲ್ ಜನರಲ್, ಬೆಂಗಳೂರು ಇವರು ಕಾರ್ಯಕ್ರಮದ ಮುಖ್ಯ ಅತಿಥಿಯಾಗಿದ್ದರು. ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದ ಆಕಿಮ್ ಬುರ್ಕಾರ್ಟ್ ಅವರು, ಮಾಹೆ ಮಣಿಪಾಲವು ಶಿಕ್ಷಣ, ಆರೋಗ್ಯ ಸೇವೆಯ ಶ್ರೇಷ್ಠತೆ ಮತ್ತು ಹೊಸ ಆವಿಷ್ಕಾರಗಳ ಕೇಂದ್ರವಾಗಿದೆ. ವೈದ್ಯಕೀಯ ಜ್ಞಾನವನ್ನು ಹೆಚ್ಚಿಸುವ ಬದ್ಧತೆಯೊಂದಿಗೆ, ರೋಗಿಗಳಿಗೆ ಉತ್ತಮ ಗುಣಮಟ್ಟದ ಆರೈಕೆ ಮತ್ತು ಚಿಕಿತ್ಸೆ ನೀಡುತ್ತಿದೆ. ಈ ಕೇಂದ್ರದ ಉದ್ಘಾಟನೆಯು ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜಿನಲ್ಲಿ ಫಲವತ್ತತೆ ಇತರ ಸಂತಾನೋತ್ಪತ್ತಿ ಸಮಸ್ಯೆಗಳಲ್ಲಿ ಆರೋಗ್ಯವನ್ನು ಸುಧಾರಿಸುವ ಉದ್ದೇಶವನ್ನು ಪೂರೈಸುವಲ್ಲಿ ಮತ್ತೊಂದು ಪ್ರಗತಿಯನ್ನು ಸಾಧಿಸಲಿದೆ ಎಂದರು. "ಜರ್ಮನಿ ಮತ್ತು ಭಾರತವು ಕಳೆದ ಏಳು ದಶಕಗಳಲ್ಲಿ ನಿರಂತರವಾಗಿ ತಮ್ಮ ಸಂಬಂಧಗಳನ್ನು ಬಲಪಡಿಸಿದೆ, ವಿಶೇಷವಾಗಿ ಜನರ ಕಲ್ಯಾಣಕ್ಕಾಗಿ ಸೇವೆ ಸಲ್ಲಿಸುವ ಗುರಿಯನ್ನು ಹೊಂದಿರುವ ವೈಜ್ಞಾನಿಕ ಸಹಕಾರದಲ್ಲಿ. ಮಾನವನ ಆರೋಗ್ಯಕ್ಕೆ ಅನುಕೂಲವಾಗುವಂತೆ ಅಂತರರಾಷ್ಟ್ರೀಯ ಸಂಶೋಧನಾ ಸಹಕಾರವನ್ನು ಉತ್ತೇಜಿಸಲು ಎರಡೂ ದೇಶಗಳು ಈಗ ಒತ್ತು ನೀಡುತ್ತಿವೆ. ಮರ್ಕ್ ಮತ್ತು ಇತರ ಜರ್ಮನ್ ಕಂಪನಿಗಳು ಸಂಶೋಧನೆ ಮತ್ತು ಅಭಿವೃದ್ಧಿ ಚಟುವಟಿಕೆಗಳಿಗಾಗಿ ವಿಶ್ವವಿದ್ಯಾನಿಲಯಗಳೊಂದಿಗೆ ತೊಡಗಿಸಿಕೊಂಡಿವೆ ಮತ್ತು ಬೆಂಗಳೂರಿನಲ್ಲಿ 135 ಬಿಲಿಯನ್ ಯುರೋ ಮೊತ್ತವನ್ನು ಹೂಡಿಕೆ ಮಾಡುವ ಮೂಲಕ ವಿಶ್ವದಾದ್ಯಂತ ಅತಿದೊಡ್ಡ ಸಂಶೋಧನಾ ಅಭಿವೃದ್ಧಿ ಸೌಲಭ್ಯವನ್ನು ಸ್ಥಾಪಿಸುವ ಪ್ರಕ್ರಿಯೆಯಲ್ಲಿವೆ" ಎಂದು ಅವರು ಹೇಳಿದರು.

ನಂತರ ಕಾರ್ಯಕ್ರಮದ ಗೌರವ ಅತಿಥಿಯಾಗಿ ಮಾತನಾಡಿದ ಮಾಹೆ ಮಣಿಪಾಲದ ಸಹ ಕುಲಪತಿ ಡಾ. ಶರತ್ ಕುಮಾರ್ ರಾವ್ ಅವರು, ಬಂಜೆತನಕ್ಕೆ ಚಿಕಿತ್ಸೆ ಮತ್ತು ಬಂಜೆತನ ನಿರ್ಮೂಲನೆ ಕ್ಷೇತ್ರವನ್ನು ಮುನ್ನಡೆಸುವಲ್ಲಿ ಸಂಶೋಧನೆಯು ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ. ಏಕೆಂದರೆ ಇದು ಹೊಸ ಚಿಕಿತ್ಸಾ ವಿಧಾನಗಳನ್ನು ಅನ್ವೇಷಿಸಲು ಮತ್ತು ಅಸ್ತಿತ್ವದಲ್ಲಿರುವ ತಂತ್ರಗಳನ್ನು ಹೆಚ್ಚಿಸಲು ವೇದಿಕೆಯನ್ನು ಒದಗಿಸುತ್ತದೆ ಹಾಗೂ ಬಂಜೆತನದ ಮೂಲ ಕಾರಣಗಳನ್ನು ಪತ್ತೆ ಹಚ್ಚಲು ಸಹಕಾರಿಯಾಗಿದೆ. ನಮ್ಮ ಈ ಕೇಂದ್ರವು ಸಂಶೋಧನಾ ಉಪಕ್ರಮಗಳನ್ನು ಮುನ್ನಡೆಸಲು ಬದ್ಧವಾಗಿದೆ, ಅದು ನವನವೀನ ಆವಿಷ್ಕಾರಗಳಿಗೆ ಕಾರಣವಾಗಬಹುದು ಹಾಗೂ ಸಂತಾನೋತ್ಪತ್ತಿ ಔಷಧ ಮತ್ತು ಭ್ರೂಣಶಾಸ್ತ್ರದ ಚಿಕಿತ್ಸಾ ಕ್ರಮವನ್ನು ಮರುರೂಪಿಸಬಹುದು. ಭಾರತದಿಂದ ಹೋಗುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಆಸ್ಟ್ರೇಲಿಯಾ, ಸಿಂಗಾಪುರ, ಯುನೈಟೆಡ್ ಸ್ಟೇಟ್ಸ್ ಮತ್ತು ಯುಕೆ ದೇಶಗಳಲ್ಲಿ ಚೀನಾವನ್ನು ಹಿಂದಿಕ್ಕಿದೆ. ಇನ್ನು ಒಂದೆರಡು ವರ್ಷಗಳಲ್ಲಿ ಇದು ಯುರೋಪಿಯನ್ ರಾಷ್ಟ್ರಗಳಲ್ಲಿ ಹೀಗೆ ಆಗಲಿದೆ ಎಂದರು.

ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಾಹೆ ಮಣಿಪಾಲದ ಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ.) ಎಂ ಡಿ ವೆಂಕಟೇಶ್ ಅವರು, ಜರ್ಮನ್ ಸಂಸ್ಥೆಗಳೊಂದಿಗಿನ ನಮ್ಮ ಸಹಭಾಗಿತ್ವವು ಆಫ್ರಿಕನ್ ದೇಶಗಳಿಗೆ ತಮ್ಮ ಐವಿಎಫ್ ಕೇಂದ್ರಗಳಲ್ಲಿ ಕೆಲಸ ಮಾಡಲು ಸಮರ್ಥ ಮಾನವ ಸಂಪನ್ಮೂಲಗಳನ್ನು ಉತ್ಪಾದಿಸುವ ಮೂಲಕ ಈ ಕ್ಷೇತ್ರದಲ್ಲಿ ಅತ್ಯುತ್ತಮ ಆರೋಗ್ಯ ಸೇವೆ ನೀಡಲು ಸಹಾಯ ಮಾಡುತ್ತಿದೆ. ಈ ಕೇಂದ್ರವು ಇನ್ನಷ್ಟು ಆವಿಷ್ಕಾರಗಳಿಗೆ ದಾರಿ ಮಾಡಿಕೊಡಲಿದೆ ಹಾಗೂ ಆರೋಗ್ಯ ವೃತ್ತಿಪರರನ್ನು ಸಬಲೀಕರಣಗೊಳಿಸಲಿದೆ ಮತ್ತು ಬಂಜೆತನದ ಸವಾಲುಗಳನ್ನು ಎದುರಿಸುತ್ತಿರುವವರಿಗೆ ಹೊಸ ಭರವಸೆಯನ್ನು ನೀಡಲಿದೆ ಎಂದು ಅಭಿಪ್ರಾಯಪಟ್ಟರು. ಅವರು ಮಾತನ್ನು ಮುಂದುವರೆಸುತ್ತ ಜೂನ್ ನಮಗೆಲ್ಲರಿಗೂ ಹೆಚ್ಚು ಸಂತೋಷದಾಯಕವಾಗಿದೆ. ಏಕೆಂದರೆ ಜೂನ್ 1 ರಂದು ಪ್ರಕಟವಾದ ಟೈಮ್ಸ್ ಇಂಪ್ಯಾಕ್ಟ್ ರಾಂಕಿಂಗ್ ನಲ್ಲಿ ಮಾಹೆ ಮಣಿಪಾಲವು ವಿಶ್ವದಲ್ಲಿ ಲಿಂಗ ಸಮಾನತೆಯಲ್ಲಿ 4 ನೇ ಸ್ಥಾನ ಮತ್ತು ಗುಣಮಟ್ಟದ ಶಿಕ್ಷಣದಲ್ಲಿ 25 ನೇ ಸ್ಥಾನದಲ್ಲಿದೆ ಮತ್ತು ಎನ್ ಐ ಆರ್ ಎಫ್ ರಾಂಕಿಂಗ್ ನಲ್ಲಿ ವಿಶ್ವವಿದ್ಯಾಲಯ ವರ್ಗದಲ್ಲಿ 6ನೇ ಸ್ಥಾನವನ್ನು ಪಡೆದುಕೊಂಡಿದೆ ಎಂದರು.

ಕ್ಲಿನಿಕಲ್ ಭ್ರೂಣಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊಫೆಸರ್ ಡಾ. ಸತೀಶ್ ಅಡಿಗ ಅವರು ಮಣಿಪಾಲ್ ಸೆಂಟರ್ ಫಾರ್ ಎಂಬ್ರಿಯಾಲಜಿ ಮತ್ತು ರಿಪ್ರೊಡಕ್ಟಿವ್ ಸೈನ್ಸ್‌ನ ಕುರಿತು ಅವಲೋಕನ ನೀಡುತ್ತಾ ತಂತ್ರಜ್ಞಾನ ವರ್ಗಾವಣೆಯ ವಿಷಯದಲ್ಲಿ ಜರ್ಮನಿಯೊಂದಿಗಿನ ಸಹಯೋಗವನ್ನು ಒತ್ತಿ ಹೇಳಿದರು. ಸಂಶೋಧನಾ ಪಾಲುದಾರಿಕೆ ಮತ್ತು ಶಿಕ್ಷಣದ ಮೂಲಕ ಫಲವತ್ತತೆಯ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಹಾಗೂ ಕೇಂದ್ರದ ಬೆಳವಣಿಗೆಗೆ ಇದು ಗಮನಾರ್ಹವಾಗಿ ಸಹಾಯ ಮಾಡಿದೆ ಎಂದರು. ಕೆಎಂಸಿ ಮಣಿಪಾಲದ ಡೀನ್ ಡಾ. ಪದ್ಮರಾಜ್ ಹೆಗ್ಡೆ ಸ್ವಾಗತಿಸಿ, ಪ್ರಜನನ ವಿಜ್ಞಾನ ವಿಭಾಗದ ಮುಖ್ಯಸ್ಥರಾದ ಪ್ರಾಧ್ಯಾಪಕ ಡಾ. ಗುರುಪ್ರಸಾದ್ ಕಲ್ಥೂರು ವಂದಿಸಿದರು ಮತ್ತು ಮಿಸ್ ರಿಕಿ ಜೋಶಿ ಕಾರ್ಯಕ್ರಮ ನಿರೂಪಿಸಿದರು.

2005 ರಲ್ಲಿ ಮಣಿಪಾಲದ ಕಸ್ತೂರ್ಬಾ ಮೆಡಿಕಲ್ ಕಾಲೇಜು ಕ್ಲಿನಿಕಲ್ ಎಂಬ್ರಿಯಾಲಜಿ ಉಪವಿಭಾಗವನ್ನು ಆರಂಭಿಸಿದ್ದು, ಇದು ಏಷ್ಯಾದಲ್ಲಿಯೇ ಮೊದಲನೆಯದಾಗಿದೆ. ಸಂಪೂರ್ಣ ಶೈಕ್ಷಣಿಕ ತರಬೇತಿ, ಸಂಶೋಧನಾ ಅನುಭವ, ನೈತಿಕತೆ ಮತ್ತು ಬಂಜೆತನಕ್ಕೆ ಸಂಬಂಧಿಸಿದ ಕೌಶಲ್ಯಗಳನ್ನು ಒದಗಿಸುವ ಗುರಿಯನ್ನು ಇದು ಹೊಂದಿದೆ. ಪ್ರಸ್ತುತ, ಬಂಜೆತನ ಮತ್ತು ಭ್ರೂಣಶಾಸ್ತ್ರ ಕ್ಷೇತ್ರದಲ್ಲಿ ಸುಧಾರಿತ ತರಬೇತಿ ಮತ್ತು ಸಂಶೋಧನೆಗಾಗಿ ಈ ಕೇಂದ್ರವು ಏಷ್ಯಾದ ಉನ್ನತ ಕೇಂದ್ರಗಳಲ್ಲಿ ಒಂದಾಗಿದೆ ಮತ್ತು ಅನೇಕ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳಿಂದ ಮನ್ನಣೆಯನ್ನು ಪಡೆದಿದೆ.



# ಮಣಿಪಾಲ: ಕೆಎಂಸಿಯಲ್ಲಿ ಭ್ರೂಣಶಾಸ್ತ್ರ ಮತ್ತು ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರ ಉದ್ಘಾಟನೆ

ಮಣಿಪಾಲ:ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಮಹಾ ವಿದ್ಯಾಲಯದಲ್ಲಿ ಇಂದು "ಮಣಿಪಾಲ ಭ್ರೂಣಶಾಸ್ತ್ರ ಮತ್ತು ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರ (ಮಣಿಪಾಲ್ ಸೆಂಟರ್ ಫಾರ್ ಎಂಬ್ರಿಯಾಲಜಿ & ರಿಪ್ರೊಡಕ್ಟಿವ್ ಸೈನ್ಸ್)" ಇದರ ಉದ್ಘಾಟನೆ ನಡೆಯಿತು.

ಆಕಿಮ್ ಬುರ್ಕಾರ್ಟ್, ಫೆಡರಲ್ ರಿಪಬ್ಲಿಕ್ ಆಫ್ ಜರ್ಮನಿಯ ಕಾನ್ಸುಲ್ ಜನರಲ್, ಬೆಂಗಳೂರು ಇವರು ಕಾರ್ಯಕ್ರಮದ ಮುಖ್ಯ ಅತಿಥಿಯಾಗಿದ್ದರು.ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದ ಬುರ್ಕಾರ್ಟ್ ಅವರು, ಮಾಹೆ ಮಣಿಪಾಲವು ಶಿಕ್ಷಣ, ಆರೋಗ್ಯ ಸೇವೆಯ ಶ್ರೇಷ್ಠತೆ ಮತ್ತು ಹೊಸ ಆವಿಷ್ಕಾರಗಳ ಕೇಂದ್ರವಾಗಿದೆ.

ವೈದ್ಯಕೀಯ ಜ್ಞಾನವನ್ನು ಹೆಚ್ಚಿಸುವ ಬದ್ಧತೆಯೊಂದಿಗೆ, ರೋಗಿಗಳಿಗೆ ಉತ್ತಮ ಗುಣಮಟ್ಟದ ಆರೈಕೆ ಮತ್ತು ಚಿಕಿತ್ಸೆ ನೀಡುತ್ತಿದೆ. ಈ ಕೇಂದ್ರದ ಉದ್ಘಾಟನೆಯು ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜಿನಲ್ಲಿ ಫಲವತ್ತತೆ ಇತರ ಸಂತಾನೋತ್ಪತ್ತಿ ಸಮಸ್ಯೆಗಳಲ್ಲಿ ಆರೋಗ್ಯವನ್ನು ಸುಧಾರಿಸುವ ಉದ್ದೇಶವನ್ನು ಪೂರೈಸುವಲ್ಲಿ ಮತ್ತೊಂದು ಪ್ರಗತಿಯನ್ನು ಸಾಧಿಸಲಿದೆ ಎಂದರು.

"ಜರ್ಮನಿ ಮತ್ತು ಭಾರತವು ಕಳೆದ ಏಳು ದಶಕಗಳಲ್ಲಿ ನಿರಂತರವಾಗಿ ತಮ್ಮ ಸಂಬಂಧಗಳನ್ನು ಬಲಪಡಿಸಿದೆ, ವಿಶೇಷವಾಗಿ ಜನರ ಕಲ್ಯಾಣಕ್ಕಾಗಿ ಸೇವೆ ಸಲ್ಲಿಸುವ ಗುರಿಯನ್ನು ಹೊಂದಿರುವ ವೈಜ್ಞಾನಿಕ ಸಹಕಾರದಲ್ಲಿ. ಮಾನವನ ಆರೋಗ್ಯಕ್ಕೆ ಅನುಕೂಲವಾಗುವಂತೆ ಅಂತರರಾಷ್ಟ್ರೀಯ ಸಂಶೋಧನಾ ಸಹಕಾರವನ್ನು ಉತ್ತೇಜಿಸಲು ಎರಡೂ ದೇಶಗಳು ಈಗ ಒತ್ತು ನೀಡುತ್ತಿವೆ. ಮರ್ಕ್ ಮತ್ತು ಇತರ ಜರ್ಮನ್ ಕಂಪನಿಗಳು ಸಂಶೋಧನೆ ಮತ್ತು ಅಭಿವೃದ್ಧಿ ಚಟುವಟಿಕೆಗಳಿಗಾಗಿ ವಿಶ್ವವಿದ್ಯಾನಿಲಯಗಳೊಂದಿಗೆ ತೊಡಗಿಸಿಕೊಂಡಿವೆ ಮತ್ತು ಬೆಂಗಳೂರಿನಲ್ಲಿ 135 ಬಿಲಿಯನ್ ಯುರೋ ಮೊತ್ತವನ್ನು ಹೂಡಿಕೆ ಮಾಡುವ ಮೂಲಕ ವಿಶ್ವದಾದ್ಯಂತ ಅತಿದೊಡ್ಡ ಸಂಶೋಧನಾ ಅಭಿವೃದ್ಧಿ ಸೌಲಭ್ಯವನ್ನು ಸ್ಥಾಪಿಸುವ ಪ್ರಕ್ರಿಯೆಯಲ್ಲಿವೆ" ಎಂದು ಅವರು ಹೇಳಿದರು.

# ಮಾಹೆ ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜಿನಲ್ಲಿ ಮಣಿಪಾಲ ಭ್ರೂಣಶಾಸ್ತ್ರ ಮತ್ತು ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರ ಉದ್ಘಾಟನೆ

By **Udupi Bulletin News Desk** - June 7, 2023 0



**ಮಣಿಪಾಲ, ಜೂನ್ 7:** ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಮಹಾ ವಿದ್ಯಾಲಯದಲ್ಲಿ ಬುಧವಾರ 'ಮಣಿಪಾಲ ಭ್ರೂಣಶಾಸ್ತ್ರ ಮತ್ತು ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರ (ಮಣಿಪಾಲ್ ಸೆಂಟರ್ ಫಾರ್ ಎಂಬ್ರಿಯಾಲಜಿ & ರಿಪ್ರೊಡಕ್ಟಿವ್ ಸೈನ್ಸ್)' ಇದರ ಉದ್ಘಾಟನೆ ನಡೆಯಿತು. ಆಕಿಮ್ ಬುರ್ಕಾರ್ಟ್, ಫೆಡರಲ್ ರಿಪಬ್ಲಿಕ್ ಆಫ್ ಜರ್ಮನಿಯ ಕಾನ್ಸುಲ್ ಜನರಲ್, ಬೆಂಗಳೂರು ಇವರು ಕಾರ್ಯಕ್ರಮದ ಮುಖ್ಯ ಅತಿಥಿಯಾಗಿದ್ದರು. ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದ ಬುರ್ಕಾರ್ಟ್ ಅವರು, ಮಾಹೆ ಮಣಿಪಾಲವು ಶಿಕ್ಷಣ, ಆರೋಗ್ಯ ಸೇವೆಯ ಶ್ರೇಷ್ಠತೆ ಮತ್ತು ಹೊಸ ಆವಿಷ್ಕಾರಗಳ ಕೇಂದ್ರವಾಗಿದೆ.

ವೈದ್ಯಕೀಯ ಜ್ಞಾನವನ್ನು ಹೆಚ್ಚಿಸುವ ಬದ್ಧತೆಯೊಂದಿಗೆ, ರೋಗಿಗಳಿಗೆ ಉತ್ತಮ ಗುಣಮಟ್ಟದ ಆರೈಕೆ ಮತ್ತು ಚಿಕಿತ್ಸೆ ನೀಡುತ್ತಿದೆ. ಈ ಕೇಂದ್ರದ ಉದ್ಘಾಟನೆಯು ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜಿನಲ್ಲಿ ಫಲವತ್ತತೆ ಇತರ ಸಂತಾನೋತ್ಪತ್ತಿ ಸಮಸ್ಯೆಗಳಲ್ಲಿ ಆರೋಗ್ಯವನ್ನು ಸುಧಾರಿಸುವ ಉದ್ದೇಶವನ್ನು ಪೂರೈಸುವಲ್ಲಿ ಮತ್ತೊಂದು ಪ್ರಗತಿಯನ್ನು ಸಾಧಿಸಲಿದೆ ಎಂದರು.

ಜರ್ಮನಿ ಮತ್ತು ಭಾರತವು ಕಳೆದ ಏಳು ದಶಕಗಳಲ್ಲಿ ನಿರಂತರವಾಗಿ ತಮ್ಮ ಸಂಬಂಧಗಳನ್ನು ಬಲಪಡಿಸಿದೆ, ವಿಶೇಷವಾಗಿ ಜನರ ಕಲ್ಯಾಣಕ್ಕಾಗಿ ಸೇವೆ ಸಲ್ಲಿಸುವ ಗುರಿಯನ್ನು ಹೊಂದಿರುವ ವೈಜ್ಞಾನಿಕ ಸಹಕಾರದಲ್ಲಿ. ಮಾನವನ ಆರೋಗ್ಯಕ್ಕೆ ಅನುಕೂಲವಾಗುವಂತೆ ಅಂತರರಾಷ್ಟ್ರೀಯ ಸಂಶೋಧನಾ ಸಹಕಾರವನ್ನು ಉತ್ತೇಜಿಸಲು ಎರಡೂ ದೇಶಗಳು ಈಗ ಒತ್ತು ನೀಡುತ್ತಿವೆ. ಮರ್ಕ್ ಮತ್ತು ಇತರ ಜರ್ಮನ್ ಕಂಪನಿಗಳು ಸಂಶೋಧನೆ ಮತ್ತು ಅಭಿವೃದ್ಧಿ ಚಟುವಟಿಕೆಗಳಿಗಾಗಿ ವಿಶ್ವವಿದ್ಯಾನಿಲಯಗಳೊಂದಿಗೆ ತೊಡಗಿಸಿಕೊಂಡಿವೆ ಮತ್ತು ಬೆಂಗಳೂರಿನಲ್ಲಿ 135 ಬಿಲಿಯನ್ ಯುರೋ ಮೊತ್ತವನ್ನು ಹೂಡಿಕೆ ಮಾಡುವ ಮೂಲಕ ವಿಶ್ವದಾದ್ಯಂತ ಅತಿದೊಡ್ಡ ಸಂಶೋಧನಾ ಅಭಿವೃದ್ಧಿ ಸೌಲಭ್ಯವನ್ನು ಸ್ಥಾಪಿಸುವ ಪ್ರಕ್ರಿಯೆಯಲ್ಲಿವೆ ಎಂದು ಅವರು ಹೇಳಿದರು.

ಕಾರ್ಯಕ್ರಮದ ಗೌರವ ಅತಿಥಿಯಾಗಿ ಮಾತನಾಡಿದ ಮಾಹೆ ಮಣಿಪಾಲದ ಸಹ ಕುಲಪತಿ ಡಾ. ಶರತ್ ಕುಮಾರ್ ರಾವ್ ಅವರು , ಬಂಜೆತನಕ್ಕೆ ಚಿಕಿತ್ಸೆ ಮತ್ತು ಬಂಜೆತನ ನಿರ್ಮೂಲನೆ ಕ್ಷೇತ್ರವನ್ನು ಮುನ್ನಡೆಸುವಲ್ಲಿ ಸಂಶೋಧನೆಯು ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ, ಏಕೆಂದರೆ ಇದು ಹೊಸ ಚಿಕಿತ್ಸಾ ವಿಧಾನಗಳನ್ನು ಅನ್ವೇಷಿಸಲು ಮತ್ತು ಅಸ್ತಿತ್ವದಲ್ಲಿರುವ ತಂತ್ರಗಳನ್ನು ಹೆಚ್ಚಿಸಲು ವೇದಿಕೆಯನ್ನು ಒದಗಿಸುತ್ತದೆ ಹಾಗೂ ಬಂಜೆತನದ ಮೂಲ ಕಾರಣಗಳನ್ನು ಪತ್ತೆ ಹಚ್ಚಲು ಸಹಕಾರಿಯಾಗಿದೆ. ನಮ್ಮ ಈ ಕೇಂದ್ರವು ಸಂಶೋಧನಾ ಉಪಕ್ರಮಗಳನ್ನು ಮುನ್ನಡೆಸಲು ಬದ್ಧವಾಗಿದೆ, ಅದು ನವನವೀನ ಆವಿಷ್ಕಾರಗಳಿಗೆ ಕಾರಣವಾಗಬಹುದು ಹಾಗೂ ಸಂತಾನೋತ್ಪತ್ತಿ ಔಷಧ ಮತ್ತು ಭ್ರೂಣಶಾಸ್ತ್ರದ ಚಿಕಿತ್ಸಾ ಕ್ರಮವನ್ನು ಮರುರೂಪಿಸಬಹುದು. ಭಾರತದಿಂದ ಹೋಗುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಆಸ್ಟ್ರೇಲಿಯಾ, ಸಿಂಗಾಪುರ, ಯುನೈಟೆಡ್ ಸ್ಟೇಟ್ಸ್ ಮತ್ತು ಯುಕೆ ದೇಶಗಳಲ್ಲಿ ಚೀನಾವನ್ನು ಹಿಂದಿಕ್ಕಿದೆ. ಇನ್ನು ಒಂದೆರಡು ವರ್ಷಗಳಲ್ಲಿ ಇದು ಯುರೋಪಿಯನ್ ರಾಷ್ಟ್ರಗಳಲ್ಲಿ ಹೀಗೆ ಆಗಲಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಾಹೆ ಮಣಿಪಾಲದ ಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ.) ಎಂ ಡಿ ವೆಂಕಟೇಶ್ ಅವರು, ಜರ್ಮನ್ ಸಂಸ್ಥೆಗಳೊಂದಿಗಿನ ನಮ್ಮ ಸಹಭಾಗಿತ್ವವು ಆಫ್ರಿಕನ್ ದೇಶಗಳಿಗೆ ತಮ್ಮ ಐವಿಎಫ್ ಕೇಂದ್ರಗಳಲ್ಲಿ ಕೆಲಸ ಮಾಡಲು ಸಮರ್ಥ ಮಾನವ ಸಂಪನ್ಮೂಲಗಳನ್ನು ಉತ್ಪಾದಿಸುವ ಮೂಲಕ ಈ ಕ್ಷೇತ್ರದಲ್ಲಿ ಅತ್ಯುತ್ತಮ ಆರೋಗ್ಯ ಸೇವೆ ನೀಡಲು ಸಹಾಯ ಮಾಡುತ್ತಿದೆ. ಈ ಕೇಂದ್ರವು ಇನ್ನಷ್ಟು ಆವಿಷ್ಕಾರಗಳಿಗೆ ದಾರಿ ಮಾಡಿಕೊಡಲಿದೆ ಹಾಗೂ ಆರೋಗ್ಯ ವೃತ್ತಿಪರರನ್ನು ಸಬಲೀಕರಣಗೊಳಿಸಲಿದೆ ಮತ್ತು ಬಂಜೆತನದ ಸವಾಲುಗಳನ್ನು ಎದುರಿಸುತ್ತಿರುವವರಿಗೆ ಹೊಸ ಭರವಸೆಯನ್ನು ನೀಡಲಿದೆ ಎಂದು ಅಭಿಪ್ರಾಯಪಟ್ಟರು. ಜೂನ್ ನಮಗೆಲ್ಲರಿಗೂ ಹೆಚ್ಚು ಸಂತೋಷದಾಯಕವಾಗಿದೆ. ಏಕೆಂದರೆ ಜೂನ್ 1 ರಂದು ಪ್ರಕಟವಾದ ಟೈಮ್ಸ್ ಇಂಪ್ಯಾಕ್ಟ್ ರಾಂಕಿಂಗ್ ನಲ್ಲಿ ಮಾಹೆ ಮಣಿಪಾಲವು ವಿಶ್ವದಲ್ಲಿ ಲಿಂಗ ಸಮಾನತೆಯಲ್ಲಿ 4 ನೇ ಸ್ಥಾನ ಮತ್ತು ಗುಣಮಟ್ಟದ ಶಿಕ್ಷಣದಲ್ಲಿ 25 ನೇ ಸ್ಥಾನದಲ್ಲಿದೆ ಮತ್ತುಎನ್ ಐ ಆರ್ ಎಫ್ ರಾಂಕಿಂಗ್ ನಲ್ಲಿ ವಿಶ್ವವಿದ್ಯಾಲಯ ವರ್ಗದಲ್ಲಿ 6 ನೇ ಸ್ಥಾನವನ್ನು ಪಡೆದುಕೊಂಡಿದೆ ಎಂದರು.

ಕ್ಲಿನಿಕಲ್ ಭ್ರೂಣಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊಫೆಸರ್ ಡಾ. ಸತೀಶ್ ಅಡಿಗ ಅವರು ಮಣಿಪಾಲ್ ಸೆಂಟರ್ ಫಾರ್ ಎಂಬ್ರಿಯಾಲಜಿ ಮತ್ತು ರಿಪ್ರೊಡಕ್ಟಿವ್ ಸೈನ್ಸ್‌ನ ಕುರಿತು ಅವಲೋಕನ ನೀಡುತ್ತಾ ತಂತ್ರಜ್ಞಾನ ವರ್ಗಾವಣೆಯ ವಿಷಯದಲ್ಲಿ ಜರ್ಮನಿಯೊಂದಿಗಿನ ಸಹಯೋಗವನ್ನು ಒತ್ತಿಹೇಳಿದರು, ಸಂಶೋಧನಾ ಪಾಲುದಾರಿಕೆ ಮತ್ತು ಶಿಕ್ಷಣದ ಮೂಲಕ ಫಲವತ್ತತೆಯ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಹಾಗೂ ಕೇಂದ್ರದ ಬೆಳವಣಿಗೆಗೆ ಇದು ಗಮನಾರ್ಹವಾಗಿ ಸಹಾಯ ಮಾಡಿದೆ ಎಂದರು.

ಕೆಎಂಸಿ ಮಣಿಪಾಲದ ಡೀನ್ ಡಾ. ಪದ್ಮರಾಜ್ ಹೆಗ್ಡೆ ಸ್ವಾಗತಿಸಿ, ಪ್ರಜನನ ವಿಜ್ಞಾನ ವಿಭಾಗದ ಮುಖ್ಯಸ್ಥರಾದ ಪ್ರಾಧ್ಯಾಪಕ ಡಾ ಗುರುಪ್ರಸಾದ್ ಕಲ್ತೂರು ವಂದಿಸಿದರು.

2005 ರಲ್ಲಿ ಮಣಿಪಾಲದ ಕಸ್ತೂರ್ಬಾ ಮೆಡಿಕಲ್ ಕಾಲೇಜು ಕ್ಲಿನಿಕಲ್ ಎಂಬ್ರಿಯಾಲಜಿ ಉಪವಿಭಾಗವನ್ನು ಆರಂಭಿಸಿದ್ದು, ಇದು ಏಷ್ಯಾದಲ್ಲಿಯೇ ಮೊದಲನೆಯದು. ಸಂಪೂರ್ಣ ಶೈಕ್ಷಣಿಕ ತರಬೇತಿ, ಸಂಶೋಧನಾ ಅನುಭವ, ನೈತಿಕತೆ ಮತ್ತು ಬಂಜೆತನಕ್ಕೆ ಸಂಬಂಧಿಸಿದ ಕೌಶಲ್ಯಗಳನ್ನು ಒದಗಿಸುವ ಗುರಿಯನ್ನು ಇದು ಹೊಂದಿದೆ. ಪ್ರಸ್ತುತ, ಬಂಜೆತನ ಮತ್ತು ಭ್ರೂಣಶಾಸ್ತ್ರ ಕ್ಷೇತ್ರದಲ್ಲಿ ಸುಧಾರಿತ ತರಬೇತಿ ಮತ್ತು ಸಂಶೋಧನೆಗಾಗಿ ಈ ಕೇಂದ್ರವು ಏಷ್ಯಾದ ಉನ್ನತ ಕೇಂದ್ರಗಳಲ್ಲಿ ಒಂದಾಗಿದೆ ಮತ್ತು ಅನೇಕ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳಿಂದ ಮನ್ನಣೆಯನ್ನು ಪಡೆದಿದೆ. ರಿಕಿ ಜೋಶಿ ಕಾರ್ಯಕ್ರಮ ನಿರೂಪಿಸಿದರು.

# Manipal Centre for Embryology & Reproductive Science Inaugurated



**Manipal, June 07, 2023:** Kasturba Medical College, Manipal, celebrated a momentous occasion today with the official inauguration of "Manipal Centre for Embryology & Reproductive Science."

Achim Burkart, Consul General of the Federal Republic of Germany in Bengaluru was the chief guest.

During his inaugural address, Burkart praised MAHE Manipal's commitment to advancing medical knowledge, delivering high-quality patient care, and fostering collaborations. He hailed the opening of the Center as a significant stride toward fulfilling the mission of improving healthcare in fertility and other reproductive issues at Kasturba Medical College, Manipal.

Speaking of the long-standing ties between Germany and India, he emphasized the importance of scientific cooperation in serving the welfare of the people. Both countries are now placing increased emphasis on promoting international research collaboration for the betterment of human health.

He also highlighted the involvement of MERCK and other German companies in research and development activities with universities, including plans to establish the world's largest research and development facility in Bengaluru, with an investment of 135 billion Euros.

Dr. Sharath Kumar Rao, Pro Vice Chancellor of MAHE, was the guest of honor.

He highlighted the crucial role of research in advancing the field of infertility practice. He emphasized that research provides a platform for discovering new treatment modalities, enhancing existing techniques, and unraveling the underlying causes of infertility.

Dr. Rao expressed confidence that Indian students surpassing their Chinese counterparts in countries such as Australia, Singapore, the United States, and the United Kingdom will soon be replicated in European countries as well.

Presiding over the event, Lt. Gen. (Dr.) M D Venkatesh, Vice-Chancellor of MAHE Manipal, lauded the partnership with German industries for their contribution to producing competent human resources to work in IVF centers across African countries, thereby providing the best healthcare in the field.

He expressed optimism that the newly inaugurated center would pave the way for groundbreaking discoveries, empower healthcare professionals, and bring renewed hope to those facing infertility challenges.

The VC also celebrated MAHE's recent achievements, including its ranking as No. 4 in Gender Equity and 25th in Quality Education in the world according to the Times Impact Ranking. The university was also ranked No. 6 in the NIRF University Category.

Professor Satish Adiga, Head of the Division of Clinical Embryology, provided an enlightening overview of the Manipal Centre for Embryology and Reproductive Science. Dr. Padmaraj Hegde, Dean of KMC Manipal, extended a warm welcome to the attendees, while Professor Guruprasad Kalthur, Head of the Reproductive Science Department, delivered the vote of thanks.

Kasturba Medical College, Manipal, holds the distinction of being the first in Asia to establish a clinical embryology subspecialty in 2005. The college aims to provide comprehensive academic training, research experience, ethical practices, and skills related to infertility.

Presently, the center stands as one of Asia's premier institutions for advanced training and research in the field of infertility and embryology, earning recognition from numerous national and international bodies. The program was skillfully led by Nicky Joshi, serving as the Master of Ceremony.

ಹಾಯ್ ಕರಾವಳಿ

ಕರಾವಳಿ

# ಮಾಹೆ ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜಿನಲ್ಲಿ ಮಣಿಪಾಲ ಭ್ರೂಣಶಾಸ್ತ್ರ ಮತ್ತು ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರ ಉದ್ಘಾಟನೆ

2 months ago



Spread the love

ಇಂಡೋ-ಜರ್ಮನ್ ಶೈಕ್ಷಣಿಕ ಪಾಲುದಾರಿಕೆಯು ಮಾನವನ ಆರೋಗ್ಯಕ್ಕೆ ಅನುಕೂಲವಾಗುವಂತೆ ಅವಕಾಶಗಳನ್ನು ತೆರೆಯುತ್ತದೆ- ಶ್ರೀ ಆಕಿಮ್ ಬುರ್ಕಾರ್ಟ್

ಮಣಿಪಾಲ, 7ನೇ ಜೂನ್ 2023:ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಮಹಾ ವಿದ್ಯಾಲಯದಲ್ಲಿ ಇಂದು "ಮಣಿಪಾಲ ಭ್ರೂಣಶಾಸ್ತ್ರ ಮತ್ತು ಸಂತಾನೋತ್ಪತ್ತಿ ವಿಜ್ಞಾನ ಕೇಂದ್ರ (ಮಣಿಪಾಲ್ ಸೆಂಟರ್ ಫಾರ್ ಎಂಬ್ರಿಯಾಲಜಿ & ರಿಪ್ರೊಡಕ್ಟಿವ್ ಸೈನ್ಸ್)" ಇದರ ಉದ್ಘಾಟನೆ ನಡೆಯಿತು. ಶ್ರೀ ಆಕಿಮ್ ಬುರ್ಕಾರ್ಟ್, ಫೆಡರಲ್ ರಿಪಬ್ಲಿಕ್ ಆಫ್ ಜರ್ಮನಿಯ ಕಾನ್ಸುಲ್ ಜನರಲ್, ಬೆಂಗಳೂರು ಇವರು ಕಾರ್ಯಕ್ರಮದ ಮುಖ್ಯ ಅತಿಥಿಯಾಗಿದ್ದರು. ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದ ಶ್ರೀ ಬುರ್ಕಾರ್ಟ್ ಅವರು, ಮಾಹೆ ಮಣಿಪಾಲವು ಶಿಕ್ಷಣ, ಆರೋಗ್ಯ ಸೇವೆಯ ಶ್ರೇಷ್ಠತೆ ಮತ್ತು ಹೊಸ ಆವಿಷ್ಕಾರಗಳ ಕೇಂದ್ರವಾಗಿದೆ. ವೈದ್ಯಕೀಯ ಜ್ಞಾನವನ್ನು ಹೆಚ್ಚಿಸುವ ಬದ್ಧತೆಯೊಂದಿಗೆ, ರೋಗಿಗಳಿಗೆ ಉತ್ತಮ ಗುಣಮಟ್ಟದ ಆರೈಕೆ ಮತ್ತು ಚಿಕಿತ್ಸೆ ನೀಡುತ್ತಿದೆ. ಈ ಕೇಂದ್ರದ ಉದ್ಘಾಟನೆಯು ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಕಾಲೇಜಿನಲ್ಲಿ ಫಲವತ್ತತೆ ಇತರ ಸಂತಾನೋತ್ಪತ್ತಿ ಸಮಸ್ಯೆಗಳಲ್ಲಿ ಆರೋಗ್ಯವನ್ನು ಸುಧಾರಿಸುವ ಉದ್ದೇಶವನ್ನು ಪೂರೈಸುವಲ್ಲಿ ಮತ್ತೊಂದು ಪ್ರಗತಿಯನ್ನು ಸಾಧಿಸಲಿದೆ ಎಂದರು. "ಜರ್ಮನಿ ಮತ್ತು ಭಾರತವು ಕಳೆದ ಏಳು ದಶಕಗಳಲ್ಲಿ ನಿರಂತರವಾಗಿ ತಮ್ಮ ಸಂಬಂಧಗಳನ್ನು ಬಲಪಡಿಸಿದೆ, ವಿಶೇಷವಾಗಿ ಜನರ ಕಲ್ಯಾಣಕ್ಕಾಗಿ ಸೇವೆ ಸಲ್ಲಿಸುವ ಗುರಿಯನ್ನು ಹೊಂದಿರುವ ವೈಜ್ಞಾನಿಕ ಸಹಕಾರದಲ್ಲಿ. ಮಾನವನ ಆರೋಗ್ಯಕ್ಕೆ ಅನುಕೂಲವಾಗುವಂತೆ ಅಂತರರಾಷ್ಟ್ರೀಯ ಸಂಶೋಧನಾ ಸಹಕಾರವನ್ನು ಉತ್ತೇಜಿಸಲು ಎರಡೂ ದೇಶಗಳು ಈಗ ಒತ್ತು ನೀಡುತ್ತಿವೆ. ಮರ್ಕ್ ಮತ್ತು ಇತರ ಜರ್ಮನ್ ಕಂಪನಿಗಳು ಸಂಶೋಧನೆ ಮತ್ತು ಅಭಿವೃದ್ಧಿ ಚಟುವಟಿಕೆಗಳಿಗಾಗಿ ವಿಶ್ವವಿದ್ಯಾನಿಲಯಗಳೊಂದಿಗೆ ತೊಡಗಿಸಿಕೊಂಡಿವೆ ಮತ್ತು ಬೆಂಗಳೂರಿನಲ್ಲಿ 135 ಬಿಲಿಯನ್ ಯುರೋ ಮೊತ್ತವನ್ನು ಹೂಡಿಕೆ ಮಾಡುವ ಮೂಲಕ ವಿಶ್ವದಾದ್ಯಂತ ಅತಿದೊಡ್ಡ ಸಂಶೋಧನಾ ಅಭಿವೃದ್ಧಿ ಸೌಲಭ್ಯವನ್ನು ಸ್ಥಾಪಿಸುವ ಪ್ರಕ್ರಿಯೆಯಲ್ಲಿವೆ" ಎಂದು ಅವರು ಹೇಳಿದರು.

ಕಾರ್ಯಕ್ರಮದ ಗೌರವ ಅತಿಥಿಯಾಗಿ ಮಾತನಾಡಿದ ಮಾಹೆ ಮಣಿಪಾಲದ ಸಹ ಕುಲಪತಿ ಡಾ.ಶರತ್ ಕುಮಾರ್ ರಾವ್ ಅವರು , 'ಬಂಜೆತನಕ್ಕೆ ಚಿಕಿತ್ಸೆ ಮತ್ತು ಬಂಜೆತನ ನಿರ್ಮೂಲನೆ ಕ್ಷೇತ್ರವನ್ನು ಮುನ್ನಡೆಸುವಲ್ಲಿ ಸಂಶೋಧನೆಯು ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ, ಏಕೆಂದರೆ ಇದು ಹೊಸ ಚಿಕಿತ್ಸಾ ವಿಧಾನಗಳನ್ನು ಅನ್ವೇಷಿಸಲು ಮತ್ತು ಅಸ್ತಿತ್ವದಲ್ಲಿರುವ ತಂತ್ರಗಳನ್ನು ಹೆಚ್ಚಿಸಲು ವೇದಿಕೆಯನ್ನು ಒದಗಿಸುತ್ತದೆ ಹಾಗೂ ಬಂಜೆತನದ ಮೂಲ ಕಾರಣಗಳನ್ನು ಪತ್ತೆ ಹಚ್ಚಲು ಸಹಕಾರಿಯಾಗಿದೆ. ನಮ್ಮ ಈ ಕೇಂದ್ರವು ಸಂಶೋಧನಾ ಉಪಕ್ರಮಗಳನ್ನು ಮುನ್ನಡೆಸಲು ಬದ್ಧವಾಗಿದೆ, ಅದು ನವನವೀನ ಆವಿಷ್ಕಾರಗಳಿಗೆ ಕಾರಣವಾಗಬಹುದು ಹಾಗೂ ಸಂತಾನೋತ್ಪತ್ತಿ ಔಷಧ ಮತ್ತು ಭ್ರೂಣಶಾಸ್ತ್ರದ ಚಿಕಿತ್ಸಾ ಕ್ರಮವನ್ನು ಮರುರೂಪಿಸಬಹುದು. ಭಾರತದಿಂದ ಹೋಗುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಆಸ್ಟ್ರೇಲಿಯಾ, ಸಿಂಗಾಪುರ, ಯುನೈಟೆಡ್ ಸ್ಟೇಟ್ಸ್ ಮತ್ತು ಯುಕೆ ದೇಶಗಳಲ್ಲಿ ಚೀನಾವನ್ನು ಹಿಂದಿಕ್ಕಿದೆ. ಇನ್ನು ಒಂದೆರಡು ವರ್ಷಗಳಲ್ಲಿ ಇದು ಯುರೋಪಿಯನ್ ರಾಷ್ಟ್ರಗಳಲ್ಲಿ ಹೀಗೆ ಆಗಲಿದೆ ಎಂದರು.




ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಾಹೆ ಮಣಿಪಾಲದ ಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ.) ಎಂ ಡಿ ವೆಂಕಟೇಶ್ ಅವರು, 'ಜರ್ಮನ್ ಸಂಸ್ಥೆಗಳೊಂದಿಗಿನ ನಮ್ಮ ಸಹಭಾಗಿತ್ವವು ಆಫ್ರಿಕನ್ ದೇಶಗಳಿಗೆ ತಮ್ಮ ಐವಿಎಫ್ ಕೇಂದ್ರಗಳಲ್ಲಿ ಕೆಲಸ ಮಾಡಲು ಸಮರ್ಥ ಮಾನವ ಸಂಪನ್ಮೂಲಗಳನ್ನು ಉತ್ಪಾದಿಸುವ ಮೂಲಕ ಈ ಕ್ಷೇತ್ರದಲ್ಲಿ ಅತ್ಯುತ್ತಮ ಆರೋಗ್ಯ ಸೇವೆ ನೀಡಲು ಸಹಾಯ ಮಾಡುತ್ತಿದೆ. ಈ ಕೇಂದ್ರವು ಇನ್ನಷ್ಟು ಆವಿಷ್ಕಾರಗಳಿಗೆ ದಾರಿ ಮಾಡಿಕೊಡಲಿದೆ ಹಾಗೂ ಆರೋಗ್ಯ ವೃತ್ತಿಪರರನ್ನು ಸಬಲೀಕರಣಗೊಳಿಸಲಿದೆ ಮತ್ತು ಬಂಜೆತನದ ಸವಾಲುಗಳನ್ನು ಎದುರಿಸುತ್ತಿರುವವರಿಗೆ ಹೊಸ ಭರವಸೆಯನ್ನು ನೀಡಲಿದೆ ಎಂದು ಅಭಿಪ್ರಾಯಪಟ್ಟರು. ಅವರು ಮಾತನಾಡುತ್ತಾ ಜೂನ್ ನಮಗೆಲ್ಲರಿಗೂ ಹೆಚ್ಚು ಸಂತೋಷದಾಯಕವಾಗಿದೆ ಏಕೆಂದರೆ ಜೂನ್ 1 ರಂದು ಪ್ರಕಟವಾದ ಟೈಮ್ಸ್ ಇಂಪ್ಯಾಕ್ಟ್ ರ್‍ಯಾಂಕಿಂಗ್ ನಲ್ಲಿ ಮಾಹೆ ಮಣಿಪಾಲವು ವಿಶ್ವದಲ್ಲಿ ಲಿಂಗ ಸಮಾನತೆಯಲ್ಲಿ 4 ನೇ ಸ್ಥಾನ ಮತ್ತು ಗುಣಮಟ್ಟದ ಶಿಕ್ಷಣದಲ್ಲಿ 25 ನೇ ಸ್ಥಾನದಲ್ಲಿದೆ ಮತ್ತುಎನ್ ಐ ಆರ್ ಎಫ್ ರ್‍ಯಾಂಕಿಂಗ್ ನಲ್ಲಿ ವಿಶ್ವವಿದ್ಯಾಲಯ ವರ್ಗದಲ್ಲಿ 6 ನೇ ಸ್ಥಾನವನ್ನು ಪಡೆದುಕೊಂಡಿದೆ , ಎಂದರು.

ಕ್ಲಿನಿಕಲ್ ಭ್ರೂಣಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊಫೆಸರ್ ಡಾ ಸತೀಶ್ ಅಡಿಗ ಅವರು ಮಣಿಪಾಲ್ ಸೆಂಟರ್ ಫಾರ್ ಎಂಬ್ರಿಯಾಲಜಿ ಮತ್ತು ರಿಪ್ರೊಡಕ್ಟಿವ್ ಸೈನ್ಸ್‌ನ ಕುರಿತು ಅವಲೋಕನ ನೀಡುತ್ತಾ ತಂತ್ರಜ್ಞಾನ ವರ್ಗಾವಣೆಯ ವಿಷಯದಲ್ಲಿ ಜರ್ಮನಿಯೊಂದಿಗಿನ ಸಹಯೋಗವನ್ನು ಒತ್ತಿಹೇಳಿದರು. ಸಂಶೋಧನಾ ಪಾಲುದಾರಿಕೆ ಮತ್ತು ಶಿಕ್ಷಣದ ಮೂಲಕ ಫಲವತ್ತತೆಯ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಹಾಗೂ ಕೇಂದ್ರದ ಬೆಳವಣಿಗೆಗೆ ಇದು ಗಮನಾರ್ಹವಾಗಿ ಸಹಾಯ ಮಾಡಿದೆ ಎಂದರು . ಕೆಎಂಸಿ ಮಣಿಪಾಲದ ಡೀನ್ ಡಾ ಪದ್ಮರಾಜ್ ಹೆಗ್ಡೆ ಸ್ವಾಗತಿಸಿ, ಪ್ರಜನನ ವಿಜ್ಞಾನ ವಿಭಾಗದ ಮುಖ್ಯಸ್ಥರಾದ ಪ್ರಾಧ್ಯಾಪಕ ಡಾ ಗುರುಪ್ರಸಾದ್ ಕಲ್ಲೂರು ವಂದಿಸಿದರು.

2005 ರಲ್ಲಿ ಮಣಿಪಾಲದ ಕಸ್ತೂರ್ಬಾ ಮೆಡಿಕಲ್ ಕಾಲೇಜು ಕ್ಲಿನಿಕಲ್ ಎಂಬ್ರಿಯಾಲಜಿ ಉಪವಿಭಾಗವನ್ನು ಆರಂಭಿಸಿದ್ದು ಇದು ಏಷ್ಯಾದಲ್ಲಿಯೇ ಮೊದಲನೆಯದು. ಸಂಪೂರ್ಣ ಶೈಕ್ಷಣಿಕ ತರಬೇತಿ, ಸಂಶೋಧನಾ ಅನುಭವ, ನೈತಿಕತೆ ಮತ್ತು ಬಂಜೆತನಕ್ಕೆ ಸಂಬಂಧಿಸಿದ ಕೌಶಲ್ಯಗಳನ್ನು ಒದಗಿಸುವ ಗುರಿಯನ್ನು ಇದು ಹೊಂದಿದೆ. ಪ್ರಸ್ತುತ, ಬಂಜೆತನ ಮತ್ತು ಭ್ರೂಣಶಾಸ್ತ್ರ ಕ್ಷೇತ್ರದಲ್ಲಿ ಸುಧಾರಿತ ತರಬೇತಿ ಮತ್ತು ಸಂಶೋಧನೆಗಾಗಿ ಈ ಕೇಂದ್ರವು ಏಷ್ಯಾದ ಉನ್ನತ ಕೇಂದ್ರಗಳಲ್ಲಿ ಒಂದಾಗಿದೆ ಮತ್ತು ಅನೇಕ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳಿಂದ ಮನ್ನಣೆಯನ್ನು ಪಡೆದಿದೆ. ಮಿಸ್ ರಿಹಿ ಜೋಶಿ ಕಾರ್ಯಕ್ರಮ ನಿರೂಪಿಸಿದರು.

ಡಾ ಪದ್ಮರಾಜ್ ಹೆಗ್ಡೆ

ಡೀನ್ – ಕೆ ಎಂ ಸಿ ಮಣಿಪಾಲ

**Youtube Link:** https://youtu.be/5429qJk6iaI